Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

02.05.2025 18.40 hrs

<><*<><>*><>

<u>ಮುಖ್ಯಾಂಶಗಳು</u>

- ಎಸ್ಸೆಸ್ಸೆಲ್ಸಿ ಫಲಿತಾಂಶ ರಾಜ್ಯದ ಶೇಕಡಾ ೬೨.೩೪ ವಿದ್ಯಾರ್ಥಿಗಳು ಉತ್ತೀರ್ಣ : ಒಟ್ಟು ೨೨ ವಿದ್ಯಾರ್ಥಿಗಳಿಗೆ ಶೇಕಡಾ ೧೦೦ ಅಂಕ
- ೨೦೨೬ರವೇಳೆಗೆ ಭಾರತ ಸಂಪೂರ್ಣ ನಕ್ಸಲ್ ಮುಕ್ತ : ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ
- ನಾಡಿನಾದ್ಯಂತ ಇಂದು ಅದ್ವೈತ ತತ್ವ ಪ್ರತಿಪಾದಕ ಶ್ರೀ ಶಂಕರಾಚಾರ್ಯರ ಜಯಂತಿ ಆಚರಣೆ
- ಮುಂದಿನ ೬ ದಿನಗಳಲ್ಲಿ ರಾಜ್ಯ ಹಲವೆಡೆ ಸಾಧಾರಣದಿಂದ ಭಾರೀಮಳೆ: ಹವಾಮಾನ ಇಲಾಖೆ ಮುನ್ಸೂಚನೆ

<><*<><>*><>

೨೦೨೪-೨೫ ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ ಒಂದರ ಫಲಿತಾಂಶ ಇಂದು ಪ್ರಕಟಗೊಂಡಿದೆ. ಈ ಬಾರಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶಾಲಾ ವಿದ್ಯಾರ್ಥಿಗಳು, ಖಾಸಗಿ ಅಭ್ಯರ್ಥಿಗಳು, ಪುನರಾವರ್ತಿತ ಶಾಲಾ ಮತ್ತು ಖಾಸಗಿ ಅಭ್ಯರ್ಥಿಗಳು ಸೇರಿದಂತೆ ಒಟ್ಟಾರೆ ಶೇಕಡ ೬೨.೩೪ ರಷ್ಟು ಫಲಿತಾಂಶ ಬಂದಿದೆ. ಮೊದಲ ಬಾರಿ ಪರೀಕ್ಷೆ ಎದುರಿಸಿದ ಶಾಲಾ ವಿದ್ಯಾರ್ಥಿಗಳಲ್ಲಿ ಶೇಕಡ ೬೬.೧೪ ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಒಟ್ಟು ೨೨ ವಿದ್ಯಾರ್ಥಿಗಳು ೬೨೫ ಕ್ಕೆ ೬೨೫ ಅಂಕ ಗಳಿಸಿದ್ದಾರೆ. ೬೫ ವಿದ್ಯಾರ್ಥಿಗಳು ೬೨೪, ೧೦೮ ವಿದ್ಯಾರ್ಥಿಗಳು ೬೨೩ ಅಂಕ ಗಳಿಸಿದ್ದಾರೆ. ಶೇಕಡಾ ೯೧.೧೨ ರಷ್ಟು ಫಲಿತಾಂಶದೊಂದಿಗೆ ದಕ್ಷಿಣ ಕನ್ನಡ ಜಿಲ್ಲೆ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದೆ. ಶೇಕಡಾ ೮೯.೯೬ ರಷ್ಟು ಫಲಿತಾಂಶದೊಂದಿಗೆ ಉಡುಪಿ ಹಾಗೂ ಶೇಕಡಾ ೮೩.೧೯ ರಷ್ಟು ಫಲಿತಾಂಶದೊಂದಿಗೆ ಉತ್ತರ ಕನ್ನಡ ಜಿಲ್ಲೆ ಕ್ರಮವಾಗಿ ೨ನೇ ಹಾಗೂ ೩ನೇ ಸ್ಥಾನದಲ್ಲಿದೆ. ಕಲಬುರ್ಗಿ ಜಿಲ್ಲೆ ಶೇಕಡಾ ೪೨.೪೩ರಷ್ಟು ಫಲಿತಾಂಶದೊಂದಿಗೆ ಕೊನೆ ಸ್ಥಾನದಲ್ಲಿದೆ. ಶಿವಮೊಗ್ಗ ಜಿಲ್ಲೆ ಯ ಮೂವರು ಪ್ರಥಮ ರ್‍ಯಾಂಕ್ ಪಡೆದಿದ್ದಾರೆ. ಶಿವಮೊಗ್ಗದ ಶ್ರೀ ರಾಮಕೃಷ್ಣ ಆಂಗ್ಲ ಮಾಧ್ಯಮ ವಸತಿ ಶಾಲೆಯ ನಿತ್ಯಾ ಎಂ. ಕುಲಕರ್ಣಿ ಪಿಯದರ್ಶಿನಿ ಪ್ರೌಢಶಾಲೆಯ ನಮನಾ ಕೆ. ಆದಿಚುಂಚನ ಗಿರಿ ಪ್ರೌಢಶಾಲೆಯ ಸಹಿಷ್ಣು ಈ ಸಾಧನೆ ಮಾಡಿದ್ದಾರೆ. ವಿದ್ಯಾರ್ಥಿನಿ ನಿತ್ಯಾ ಎಂ. ಕುಲಕರ್ಣಿ ತಮ್ಮ ಈ ಸಾಧನೆ ಕುರಿತಂತೆ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ವಿದ್ಯಾರ್ಥಿನಿ ನಿತ್ಯಾ ಎಂ. ಕುಲಕರ್ಣಿ

ಶೇಕಡಾ ೭೭.೯ ರಷ್ಟು ಫಲಿತಾಂಶ ಪಡೆದು ಚಿಕ್ಕಮಗಳೂರು ಜಿಲ್ಲೆ ರಾಜ್ಯದಲ್ಲಿ ೮ನೇ ಸ್ಥಾನ ಗಳಿಸಿದೆ. ತಲಾ ೬೧೯ ಅಂಕಗಳೊಂದಿಗೆ ವಿದ್ಯಾರ್ಥಿನಿ ಈಶಾನ್ಯ ಹಾಗೂ ತರುಣ್ ಜಿಲ್ಲೆಯಲ್ಲೇ ಅತ್ಯುತ್ತಮ ಅಂಕ ಗಳಿಸಿದ್ದಾರೆ.

ಶೇಕಡಾ ೬೯.೨೭ರಷ್ಟು ಫಲಿತಾಂಶದೊಂದಿಗೆ ಮಂಡ್ಯ ಜಿಲ್ಲೆ ರಾಜ್ಯದಲ್ಲಿ ೧೨ನೇ ಸ್ಥಾನ ಗಳಿಸಿದ ಜಿಲ್ಲೆಯ ಸಾಹುಕಾರ್ ಚಿಕ್ಕನ ಗೌಡ ಪ್ರೌಢಶಾಲೆಯ ಜೆ.ದೃತಿ ೬೨೫ ಕ್ಕೆ ೬೨೫ ಅಂಕ ಗಳಿಸಿ ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿದ್ದಾರೆ. ಹಾಸನ ನಗರದ ವಿಜಯ ಶಾಲೆಯ ವಿದ್ಯಾರ್ಥಿ ಉತ್ಸವ್ ಪಟೇಲ್ ೬೨೫ಕ್ಕೆ ೬೨೫ ಅಂಕಗಳನ್ನು ಗಳಿಸಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ. ಹಾಸನದ ಟೈಮ್ಸ್ ಅಂತಾರಾಷ್ಟ್ರೀಯ ಶಾಲೆಯ ಇಬ್ಬರು ವಿದ್ಯಾರ್ಥಿಗಳು ತಲಾ ೬೨೪ ಅಂಕ ಪಡೆದು ರಾಜ್ಯಕ್ಕೆ ತೃತೀಯ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿನಿ ವಿ.ಕೆ. ಶಮಿಕ ವಿಜ್ಞಾನ ಹಾಗೂ ಸಮಾಜ ವಿಜ್ಞಾನ ವಿಷಯಗಳಲ್ಲಿ ೯೯ ಅಂಕಗಳನ್ನು ಪಡೆದಿದ್ದು ಮಿಕ್ಕೆಲ್ಲ ವಿಷಯಗಳಲ್ಲಿ ಶೇಕಡ ೧೦೦ ಅಂಕ ಗಳಿಸಿದ್ದಾರೆ. ಆರ್.ಧನುಷ್, ಇಂಗ್ಲಿಷ್ ಹಾಗೂ ವಿಜ್ಞಾನ ವಿಷಯದಲ್ಲಿ ೯೯ ಅಂಕ ಗಳಿಸಿದ್ದು, ಉಳಿದ ವಿಷಯಗಳಲ್ಲಿ ಶೇಕಡ ೧೦೦ ಅಂಕ ಗಳಿಸಿದ್ದಾರೆ. ಶೇಕಡಾ ೭೪.೦೨ ರಷ್ಟು ಫಲಿತಾಂಶದೊಂದಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ರಾಜ್ಯದಲ್ಲಿ ೯ನೇ ಸ್ಥಾನ ಪಡೆದಿದೆ. ಜಿಲ್ಲೆಯ ಇಬ್ಬರು ವಿದ್ಯಾರ್ಥಿಗಳಾದ ದೊಡ್ಡಬಳ್ಳಾಪುರದ ಎಸ್ ಜೆ ಸಿ ಆರ್ ಶಾಲೆಯ ರಂಜಿತ ಎ ಸಿ ಹಾಗೂದೇವನಹಳ್ಳಿಯ ನೀಲಗಿರೇಶ್ವರ ಪ್ರೌಢಶಾಲೆಯ ಸಿ ಭಾವನ ೬೨೫ ಕ್ಕೆ ೬೨೫ ಅಂಕ ಗಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಶಿರಸಿಯ ಸರ್ಕಾರಿ ಉರ್ದು ಆಂಗ್ಲ ಮಾಧ್ಯಮ ಪ್ರೌಢಶಾಲೆ ವಿದ್ಯಾರ್ಥಿನಿ ಶಗುಫ್ತಾ ಅಂಜುಮ್ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ೬೨೫ ಕ್ಕೆ ೬೨೫ ಅಂಕ ಪಡೆದು ಸಾಧನೆ ತೋರಿದ್ದಾರೆ. ಬಿಹಾರ ಮೂಲದ ಶಗುಫ್ತಾ ಐದು ವರ್ಷಗಳಿಂದ ಶಿರಸಿಯ ಸರ್ಕಾರಿ ಉರ್ದು ಶಿಕ್ಷಣ ಸಂಸ್ಥೆಯಲ್ಲಿ ಪ್ರಾಥಮಿಕ, ಪ್ರೌಢ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದಳು. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಶಗುಫ್ತಾ, ಶಿಕ್ಷಕ ವೃಂದದಿಂದ ಸಾಕಷ್ಟು ಬೆಂಬಲ ಹಾಗೂ ಕಠಿಣ ಪರಿಶ್ರಮವೇ ಸಾಧನೆಗೆ ಮೂಲ ಕಾರಣ. ಭವಿಷ್ಯದಲ್ಲಿ ವೈದ್ಯೆಯಾಗುವ ಆಸೆ ಹೊಂದಿದ್ದೇನೆ ಎಂದಿದ್ದಾರೆ.

<><*<><>*><>

೨೦೨೬ರವೇಳೆಗೆ ಭಾರತವನ್ನು ನಕ್ಸಲ್ ಮುಕ್ತ ಗೊಳಿಸಲಾಗುವುದು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಇಂದು ಮಾತನಾಡಿದ ಅವರು ಪಹಲ್ಗಾಮ್ ಘಟನೆ ಕುರಿತು ತಮಗೆ ಅತೀವ ದು:ಖ ಇದ್ದು ಪ್ರದಾನಿ ನರೇಂದ್ರ ಮೋದಿ ಹಾಗೂ ಗೃಹಸಚಿವರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದ್ದು ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯ ಜೊತೆಗೆ ಅಗತ್ಯ ಕ್ರಮ

ಕೈಗೊಳ್ಳಲಾಗುವುದು ಎಂದರು. ಭಾರತದಲ್ಲಿ ಈ ಹಿಂದೆ ಹೋಲಿಸಿದರೆ ಪ್ರಸ್ತುತ ಶೇಕಡ ೧೦ರಷ್ಟು ಮಾತ್ರ ನಕ್ಸಲ್ ವಾದ ಉಳಿದುಕೊಂಡಿದೆ. ಇದನ್ನು ಶೀಘ್ರದಲ್ಲಿ ನಿರ್ಮೂಲನೆ ಮಾಡಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

ಧ್ವನಿ: ಪ್ರಹ್ಲಾದ್ ಜೋಷಿ

<><*<><>*><>

ಬಳ್ಳಾರಿ ನಗರದಲ್ಲಿ ಇಂದು ಪಹಲ್ಗಾಂನಲ್ಲಿ ಭಯೋತ್ಪಾದಕ ದಾಳಿಯನ್ನು ಖಂಡಿಸಿ ವಿಶ್ವ ಹಿಂದೂ ಪರಿಷತ್ತಿನ ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿದರು. ಗಡಗಿ ಚೆನ್ನಪ್ಪ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನೆ ನಡೆಸಿದ ಕಾರ್ಯ ಕರ್ತರು ಮೃತಪಟ್ಟವರ ಆತ್ಮಕ್ಕೆ ಶಾಂತಿ ಕೋರಿದರು.

<><*<><>*><>

ಇಂದು ನಾಡಿನಾದ್ಯಂತ ಅದ್ವೈತ ತತ್ವ ಪ್ರತಿಪಾದಕ, ಶ್ರೀ ಶಂಕರಾಚಾರ್ಯರ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಈ ಹಿನ್ನೆಲೆ ಶೃಂಗೇರಿಯ ಶ್ರೀ ಶಾರದಾ ಪೀಠದಲ್ಲಿ ಇಂದು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಜಯಂತ್ಯೋತ್ಸವದ ಭಾಗವಾಗಿ ಶಂಕರ ಭಗವತ್ ಪಾದಾಚಾರ್ಯರಿಗೆ ವಿಶೇಷ ಪೂಜೆ, ಮಹಾ ಮಂಗಳಾರತಿ ಹಾಗೂ ಕನಕಾಭಿಷೇಕ ನೆರವೇರಿಸಲಾಯಿತು. ಇದರ ಜೊತೆಗೆ ವೇದ ಸ್ವಸ್ಥಿ ವಾಚನ, ಶಂಕರ ದಿಗ್ವಿಜಯ ಪಾರಾಯಣೆ, ಅಷ್ಠಾವಧಾನ ಸೇವೆ ಆಯೋಜಿಸಲಾಗಿದೆ. ನಾಳೆ ಬೆಳಿಗ್ಗೆ ಶಂಕರಾಚಾರ್ಯರ ಮಹಾರಥೋತ್ಸವ ಜರುಗಲಿದೆ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಶಂಕರಾಚಾರ್ಯರ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಕೋಲಾರ ಜಿಲ್ಲೆಯಲ್ಲಿ ಜಿಲ್ಲಾಡಳಿತ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಯೋಜಿಸಲಾದ ಕಾರ್ಯಕ್ರಮವನ್ನು ತಹಶಿಲ್ದಾರ್ ಹಂಸ ಮರಿಯಾ ಉದ್ಘಾಟಿಸಿದರು. ಈ ವೇಳೆ ಮಾತಾನಾಡಿದ ಅವರು ಪ್ರಾಚೀನ ಭಾರತೀಯ ಉಪನಿಷತ್ತಿನ ತತ್ವಗಳು ಮತ್ತು ಹಿಂದೂ ಸಂಸ್ಕೃತಿಯ ಪುನರುಜ್ಜೀವನಕ್ಕೆ ಶಂಕರಾಚಾರ್ಯರು ನೀಡಿದ ಕೊಡುಗೆ ಅಪಾರ ಎಂದರು. ಮಂಡ್ಯದಲ್ಲಿ ಆಯೋಜಿಸಲಾಗಿದ್ದ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಸಿ. ಶಿವಾನಂದ ಶಂಕರಾಚಾರ್ಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಅವರು ಇಂದಿನ ಪೀಳಿಗೆಗಳು ಶಂಕರಾಚಾರ್ಯರ ತತ್ವಸಿದ್ಧಾಂತಗಳು ಮತ್ತು ಆದರ್ಶಘಳನ್ನು ಅರಿತು ಅಳವಡಿಸಿಕೊಳ್ಳಬೇಕಾಗಿದೆ ಎಂದರು.

<><*<><>*><>

ಇನ್ನು ಹವಾವರ್ತಮಾನ

ರಾಜ್ಯದ ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಇಂದು ಮಳೆಯಾಗಿದ್ದು ಉತ್ತರ ಒಳನಾಡಿನಲ್ಲಿ ಒಣಹವೆ ಇತ್ತು. ಪ್ರಮುಖವಾಗಿ ತುಮಕೂರು ಜಿಲ್ಲೆಯ ಸಿರಾ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯಲ್ಲಿ ತಲಾ ೩ ಸೆಂಟಿ.ಮೀ ಮಳೆಯಾಗಿದೆ. ಚಿಕ್ಕಮಗಳೂರಿನ ಯಗಟಿ, ಬೇಲೂರಿನಲ್ಲಿ ತಲಾ ೨ ಸೆಂಟಿ ಮೀಟರ್, ಧರ್ಮಸ್ಥಳ ಬರ್ಗೂರು, ಉಪ್ಪಿನಂಗಡಿ, ಬೆಳ್ತಂಗಡಿ ಯಲ್ಲಿ ತಲಾ ೧ಸೆಂಟಿಮೀಟರ್ ಮಳೆಯಾಗಿದೆ. ಕಳೆದ ರಾತ್ರಿ ಬೆಂಗಳೂರಿನ ಕೆಲವಡೆಯೂ ಧಾರಕಾರ ಮಳೆಯಾಗಿದೆ. ರಾಜ್ಯದಲ್ಲಿ ಅತೀ ಹೆಚ್ಚು ಉಷ್ಣಾಂಶ ೪೨ ಡಿಗ್ರಿ ಸೆಲ್ಸಿಯಸ್ ಕಲಬುರ್ಗಿಯಲ್ಲಿ ದಾಖಲಾಗಿದೆ. ಇಂದು ಮತ್ತೆ ನಾಳೆ ಮಂಡ್ಯ, ಮೈಸೂರು, ಚಿಕ್ಕಮಗಳೂರು, ತುಮಕೂರು , ರಾಮನಗರ ಹಾಗೂ ಹಾಸನ ಜಿಲ್ಲೆಗಳಲ್ಲಿ ಬಾರಿ ಮಳೆಯಾಗುವ ಸಾಧ್ಯತೆಯಿದೆ. ಮುಂದಿನ ೭ ದಿನಗಳವರೆಗೆ ಕರಾವಳಿಯ ದಕ್ಷಿಣ ಕನ್ನಡ, ಉಡುಪಿ, ಉತ್ತರಕನ್ನಡ, ಉತ್ತರ ಒಳನಾಡಿನ ಬೀದರ್, ಕಲ್ಬುರ್ಗಿ, ರಾಯಚೂರು, ಗದಗ, ಯಾದಗಿರಿ, ಹಾವೇರಿ, ದಕ್ಷಿಣ ಒಳನಾಡಿನ ಮಂಡ್ಯ, ಮೈಸೂರು, ಚಿಕ್ಕಮಗಳೂರು, ಬೆಂಗಳೂರು ಗ್ರಾಮಾಂತರ ಚಿಕ್ಕಬಳ್ಳಾಪುರ , ಕೋಲಾರ, ಹಾಸನ ಜಿಲ್ಲೆಗಳಲ್ಲಿ ಹಗುರದಿಂದ ಸಾಧರಣ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರು ಹಾಗೂ ಸುತ್ತಮುತ್ತ ಮುಂದಿನ ೨೪ ಗಂಟೆಗಳಲ್ಲಿ ಭಾಗಶ: ಮೋಡ ಕವಿದ ವಾತಾವರಣ ವಿರಲಿದ್ದು ಹಗುರದಿಂದ ಸಾಧಾರಣ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೩೪ ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>